# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 13 (99) |
| ಸದಸ್ಯರ ಹೆಸರು | ಡಾ: ಚಂದ್ರಶೇಖರ ಬಸವರಾಜ ಪಾಟೀಲ<br>(ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 09-12-2024 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡವು ಕಳೆದ 5 ವರ್ಷಗಳಿಂದ ಶಿಥಿಲಾವ್ಯವಸ್ಥೆಯಲ್ಲಿದ್ದು, ವಿದ್ಯಾರ್ಥಿಗಳು ಜೀವ ಭಯದಲ್ಲಿ ಅಭ್ಯಾಸ ಮಾಡುತ್ತಿರುವುದು ಮತ್ತು ಕಾಲೇಜು ಕಟ್ಟಡ ಪೂರ್ತಿ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಹೌದು. ಸರ್ಕಾರದ ಗಮನಕ್ಕೆ ಬಂದಿದೆ.<br><br>ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ 2020-21ನೇ ಸಾಲಿನ ಸಾಮಾನ್ಯ ಯೋಜನೆಯಡಿ ಮಹಿಳಾ ವಿಶ್ರಾಂತಿ ಕೊಠಡಿ ನಿರ್ಮಾಣವನ್ನೊಳಗೊಂಡಂತೆ ದುರಸ್ತಿ ಕಾಮಗಾರಿಗಳಿಗಾಗಿ ರೂ.50.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ. |
| (ಆ) | ಕಳೆದ 5 ವರ್ಷಗಳಿಂದ ಕಾಲೇಜು ದುರಸ್ತಿ ಕಾಮಗಾರಿ ಕೈಗೊಳ್ಳದಿರಲು ಕಾರಣವೇನು; (ವಿವರ ನೀಡುವುದು) | ದುರಸ್ತಿ ಅಗತ್ಯವಿದ್ದ ಕಾಲೇಜಿನ ಕಟ್ಟಡ ಹಾಗೂ ಜಮೀನಿಗೆ ಸಂಬಂಧಿಸಿದಂತೆ ವಿವಾದವು ನ್ಯಾಯಾಲಯದಲ್ಲಿ ಬಾಕಿ ಇದ್ದುದರಿಂದ, ದುರಸ್ತಿ ಕಾಮಗಾರಿ ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ. |
| (ಇ) | ಕಾಲೇಜು ದುರಸ್ತಿ ಕಾರ್ಯವನ್ನು ಯಾವಾಗ ಕೈಗೊಳ್ಳಲಾಗುವುದು?<br>(ಮಾಹಿತಿ ನೀಡುವುದು) | ನ್ಯಾಯಾಲಯದಲ್ಲಿ ವಿವಾದವು ಬಗೆಹರಿದಿದ್ದು, ಸದರಿ ಕಾಲೇಜಿನ ಕಟ್ಟಡ ದುರಸ್ತಿ ಕಾಮಗಾರಿಯನ್ನು ಈಗಾಗಲೇ ಕೈಗೊಳ್ಳಲಾಗಿದೆ. |

(ಕಡತ ಸಂಖ್ಯೆ: ಇಡಿ 144 ಹೆಚ್‌ಪಿಸಿ 2024)

(ಡಾ|| ಎಂ. ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು